# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೇಳನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ: 22ನೇ ಸೆಪ್ಟೆಂಬರ್, 2022**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೆಯ ಪಟ್ಟಿ

### 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಶಾಸಕರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೂರನೇ ಮತ್ತು ನಾಲ್ಕನೇ ಪಟ್ಟಿಯ ರೀತ್ಯಾ.

### 03. ಸದನ ಸಮಿತಿಗಳ ಕಾಲಾವಕಾಶವನ್ನು ವಿಸ್ತರಿಸುವ ಪ್ರಸ್ತಾವಗಳು

01. **ಶ್ರೀ ಎನ್. ರವಿಕುಮಾರ್ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:–**

ರಾಜ್ಯದಲ್ಲಿರುವ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಕ್ಲಬ್‌ಗಳ ಕಾರ್ಯವೈಖರಿ ಮತ್ತು ಚಟುವಟಿಕೆಗಳನ್ನು ಪರಿಶೀಲಿಸಲು ರಚಿಸಲಾಗಿರುವ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ಇನ್ನೂ 06 ತಿಂಗಳು ಕಾಲಾವಕಾಶವನ್ನು ವಿಸ್ತರಿಸುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು.

02. **ಶ್ರೀ ಆಯನೂರು ಮಂಜುನಾಥ್ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:–**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕುಡಿಯುವ ನೀರು ಮತ್ತು ನೈರ್ಮಲ್ಯ ಕಾರ್ಯಕ್ರಮಕ್ಕೆ ಬಿಡುಗಡೆಯಾದ ಹಣವನ್ನು ಅವ್ಯವಹಾರ ಮಾಡಿರುವ ಸಂಬಂಧ ಪರಿಶೀಲಿಸಿ ವರದಿ ನೀಡಲು ರಚಿಸಲಾಗಿರುವ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ಸದನದ ಸಹಮತಿಯನ್ನು ಕಾಯ್ದಿರಿಸಿ ಇನ್ನೂ 06 ತಿಂಗಳ ಅವಧಿಗೆ ಕಾಲಾವಕಾಶವನ್ನು ವಿಸ್ತರಿಸಲಾಗಿದ್ದ ಪ್ರಸ್ತಾವವನ್ನು ಮಂಡಿಸುವುದು.

### 04. ಸಭೆಯ ಮುಂದಿಡಲಾಗುವ ಕಾಗದ ಪತ್ರ

**ಕಾರ್ಯದರ್ಶಿಯವರು:–**

ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ 2022ನೇ ಸಾಲಿನ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದಿಡುವುದು.

..2/

## 05. ಶಾಸನ ರಚನೆ

### ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ, 2022

**ಡಾ. ಅಶ್ವಥ ನಾರಾಯಣ ಸಿ.ಎನ್. (ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 06. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಪುಟ್ಟಣ್ಣ** ಅವರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ಕೆಂಪೇಗೌಡ ಬಡಾವಣೆ ನಿರ್ಮಾಣ ಹಾಗೂ ಪೆರಿಫೆರಲ್ ರಸ್ತೆ ನಿರ್ಮಾಣಕ್ಕಾಗಿ ಸ್ವಾಧೀನ ಪಡಿಸಿಕೊಂಡಿರುವ ರೈತರ ಜಮೀನುಗಳನ್ನು ಅನ್ಯ ಉದ್ದೇಶಗಳಿಗೆ ಬಳಸಿಕೊಳ್ಳುತ್ತಿರುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

02. **ಶ್ರೀ ಮಧು ಜಿ. ಮಾದೇಗೌಡ** ಅವರು ಸಹಾಯಕ ಪ್ರಾಧ್ಯಾಪಕರುಗಳಿಗೆ ಪತಿ–ಪತ್ನಿ ಪ್ರಕರಣದಡಿ ಸ್ಥಳ ಮಾರ್ಪಾಡು ಮಾಡಿಕೊಳ್ಳಲು ಅವಕಾಶ ಕಲ್ಪಿಸುವ ಕುರಿತು ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

03. **ಶ್ರೀ ಬಿ.ಎಂ. ಫಾರೂಖ್** ಅವರು ವ್ಯಾಪಾರ ಹಾಗೂ ವಾಣಿಜ್ಯ ಉದ್ದೇಶಕ್ಕಾಗಿ ವಿದೇಶಿ ಕಂಪನಿಗಳೊಂದಿಗೆ ಬಂಡವಾಳ ಹೂಡಲು ಹಾಗೂ ವ್ಯಾಪಾರ ಮಾಡಲು ವಿಧಾನ ಮಂಡಲದ ಶಾಸಕರುಗಳಿಗೆ ಇರುವ ಅಡೆತಡೆಗಳ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

04. **ಶ್ರೀ ಗಣಪತಿ ದುಮ್ಮಾ ಉಳ್ವೇಕರ್** ಅವರು ಮತ್ಸ್ಯ ಸಿರಿ ಯೋಜನೆಯಲ್ಲಿ ಟ್ರಾಲರ್ ಅಥವಾ ಪರ್ಶಿಯನ್ ದೋಣಿಗಳನ್ನು ನಿರ್ಮಿಸಲು ಅವಕಾಶ ನೀಡುವ ಕುರಿತು ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

05. **ಶ್ರೀ ಕೇಶವ ಪ್ರಸಾದ್ ಎಸ್**. ಅವರು ಬೆಂಗಳೂರಿನ ಹೆಬ್ಬಾಳ ಫ್ಲೈ ಓವರ್ ಬಳಿ ದಿನನಿತ್ಯ ವಾಹನ ದಟ್ಟಣೆ ಹೆಚ್ಚಾಗಿರುವುದರಿಂದ ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿದ್ದು ಸರ್ಕಾರವು ಪರ್ಯಾಯ ಪರಿಹಾರವನ್ನು ಕಲ್ಪಿಸುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

06. **ಶ್ರೀ ಮಂಜುನಾಥ್ ಭಂಡಾರಿ** ಅವರು ರಾಜ್ಯದ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರನ್ನು ತೆಗೆದು ಹಾಕುವ ಪ್ರಕ್ರಿಯೆಗೆ ಸಂಬಂಧಿಸಿ ದೂರು ದಾಖಲಿಸುವ ಮತ್ತು ತನಿಖೆ ನಡೆಸಿ ವರದಿ ನೀಡುವ ಅಧಿಕಾರವನ್ನು ರಾಜ್ಯ ಸರ್ಕಾರದ ಹಂತದಿಂದ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಯ ಹಂತಕ್ಕೆ ನೀಡಿರುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

07. **ಶ್ರೀ ಪಿ.ಹೆಚ್. ಪೂಜಾರ್** ಅವರು ಬಾಗಲಕೋಟೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪಿಸುವಲ್ಲಿ ಸರ್ಕಾರ ಕೈಗೊಂಡಿರುವ ಕುರಿತು ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

08. **ಡಾ. ಡಿ. ತಿಮ್ಮಯ್ಯ** ಅವರು ಪಿರಿಯಾಪಟ್ಟಣ ತಾಲ್ಲೂಕಿನ ಮಾಲಂಗಿ, ಚೌತಿ ಹಾಗೂ ಪಂಚವಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅರಣ್ಯದಂಚಿನ ಗ್ರಾಮಗಳಲ್ಲಿನ ಬುಡಕಟ್ಟು ಕುಟುಂಬದವರನ್ನು ಅರಣ್ಯದಿಂದ ಹೊರ ಹಾಕಿರುವುದರಿಂದ ಉಂಟಾಗಿರುವ ಸಮಸ್ಯೆ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

## 07. ನಿಯಮ 330ರ ಮೇರೆಗೆ

01. **ಶ್ರೀಯುತರುಗಳಾದ ಕೆ.ಎ. ತಿಪ್ಪೇಸ್ವಾಮಿ, ಎಸ್.ಎಲ್.ಭೋಜೇಗೌಡ, ಗೋವಿಂದರಾಜು ಮತ್ತು** ಸಿ.ಎನ್. **ಮಂಜೇಗೌಡ** ಅವರುಗಳು ರಾಜ್ಯದಲ್ಲಿ ಇತ್ತೀಚಿಗೆ ನಡೆದಿರುವ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ನೇಮಕಾತಿ ಪ್ರಕ್ರಿಯೆಯಲ್ಲಿನ ಅವ್ಯವಹಾರದ ಕುರಿತು ಪ್ರಸ್ತಾಪಿಸುವುದು.

02. **ಶ್ರೀಯುತರುಗಳಾದ ಮಾನ್ಯ ವಿರೋಧ ಪಕ್ಷದ ನಾಯಕರಾದ ಬಿ.ಕೆ.ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಪ್ರಕಾಶ್ ಕೆ. ರಾಥೋಡ್, ಡಾ, ಕೆ. ಗೋವಿಂದರಾಜು, ಸಲೀಂ ಅಹಮದ್ ಮತ್ತು ಕೆ. ಅಬ್ದುಲ್ ಜಬ್ಬರ್ ಹಾಗೂ ಇತರರುಗಳು** ರಾಜ್ಯದಲ್ಲಿ ನಿರುದ್ಯೋಗಿ ಯುವಕರ ಸಂಖ್ಯೆ ಹೆಚ್ಚಾಗಿದ್ದು, ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹುದ್ದೆಗಳು ಭರ್ತಿಯಾಗದೆ ಖಾಲಿ ಇರುವ ಕುರಿತು ಪ್ರಸ್ತಾಪಿಸುವುದು.

03. **ಶ್ರೀ ಸವದಿ ಲಕ್ಷ್ಮಣ** ಅವರು ಹಾವನೂರು ವರದಿಯನ್ವಯ ಮಾಳಿ–ಮಾಲಗರ ಸಮುದಾಯದವರಿಗೆ ಪ್ರವರ್ಗ 2ಎ ಜಾತಿ/ ಸಿಂಧುತ್ವ ಪ್ರಮಾಣ ಪತ್ರ ವಿತರಿಸುವ ಕುರಿತು ಪ್ರಸ್ತಾಪಿಸುವುದು.

04. **ಶ್ರೀ ಅಡಗೂರು ಹೆಚ್. ವಿಶ್ವನಾಥ್ ಮತ್ತು ಶ್ರೀ ಮರಿತಿಬ್ಬೇಗೌಡ** ಅವರುಗಳು ಇತ್ತೀಚಿಗೆ ರಾಜ್ಯದ ಜಿಲ್ಲೆಯೊಂದರಲ್ಲಿ ಧರ್ಮಪೀಠದ ಧರ್ಮಾಧಿಕಾರಿಯೊಬ್ಬರು ಮಠದಲ್ಲಿ ವ್ಯಾಸಂಗ ಮಾಡುತ್ತಿದ್ದ ಅಪ್ರಾಪ್ತ ವಯಸ್ಸಿನ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯವೆಸಗಿ, ಪೋಸ್ಕೋ ಕಾಯ್ದೆಯಡಿಯಲ್ಲಿ ಪ್ರಕರಣ ದಾಖಲಾಗಿರುವ ಹಿನ್ನಲೆಯಲ್ಲಿ ಸದರಿ ಕಾಯ್ದೆಯ ಪರಿಣಾಮಗಳ ಬಗ್ಗೆ ಪ್ರಸ್ತಾಪಿಸುವುದು.

05. **ಶ್ರೀ ಡಿ.ಎಸ್. ಅರುಣ್** ಅವರು ಶಿವಮೊಗ್ಗ ಜಿಲ್ಲೆಯಲ್ಲಿ ಉತ್ಪಾದನೆಯಾಗುವ ಅಡಿಕೆ ಮಾರಾಟದ ಒಟ್ಟು ವಹಿವಾಟಿನ ತೆರಿಗೆ ಆದಾಯದ ಬಗ್ಗೆ ಗೊಂದಲವಿರುವ ಕುರಿತು ಪ್ರಸ್ತಾಪಿಸುವುದು.

**08. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಮುಂದುವರೆದ ಚರ್ಚೆ**

**ಶ್ರೀಯುತರುಗಳಾದ;–**

| | |
|---|---|
| ಬಿ.ಕೆ.ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಸಲೀಂ ಅಹಮದ್, ಕೆ.ಎ.ತಿಪ್ಪೇಸ್ವಾಮಿ, ಶರವಣ ಟಿ.ಎ. ಮತ್ತು ಬಿ.ಎಂ. ಫಾರೂಖ್ ಹಾಗೂ ಇತರರುಗಳು | ರಾಜ್ಯದಲ್ಲಿ ಇತ್ತೀಚೆಗೆ ಸುರಿಯುತ್ತಿರುವ ಮಳೆಯಿಂದಾಗಿ ಬೆಂಗಳೂರು ನಗರ ಸೇರಿದಂತೆ ರಾಜ್ಯದ ಬಹುತೇಕ ಜಿಲ್ಲೆಗಳು ಪ್ರವಾಹ ಭೀತಿಯನ್ನು ಎದುರಿಸುತ್ತಿದ್ದು, ರಾಜ್ಯದ ಹೆದ್ದಾರಿ ಮತ್ತು ರಸ್ತೆಗಳು ಕೊಚ್ಚಿಹೋಗಿದ್ದು, ಕೆರೆ ಕೋಡಿಗಳು ಒಡೆದು ಅಪಾರ ಹಾನಿಯುಂಟಾಗಿ ಜನರು ಸಂಕಷ್ಟಕ್ಕೆ ಒಳಗಾಗಿರುವ ಕುರಿತು.<br>ಐದನೇ ದಿನ |

**09. ಅರ್ಧ ಗಂಟೆ ಕಾಲಾವಧಿ ಚರ್ಚೆ**

01. ರಾಜ್ಯದಲ್ಲಿರುವ ಯಶಸ್ವಿನಿ ಯೋಜನೆ ಕುರಿತು ದಿನಾಂಕ:13.09.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:27 (128)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

02. ರಾಜ್ಯದ ಪೋಲೀಸರಿಗೆ ಕಂಪ್ಯೂಟರ್ ಕಲಿಕೆ ಮಾಡಿರುವ ಬಗ್ಗೆ ದಿನಾಂಕ:15.09.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:395 (474)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಆಯನೂರು ಮಂಜುನಾಥ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

03. ಪವನ ವಿದ್ಯುತ್ ಉತ್ಪಾದನೆಗೆ ಉತ್ತೇಜನ ನೀಡಲು ವೀಲಿಂಗ್ ಮತ್ತು ಬ್ಯಾಂಕಿಂಗ್ ಸೌಲಭ್ಯ ವಿಸ್ತರಿಸುವ ಕುರಿತು ದಿನಾಂಕ:19.09.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:82 (708)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಬಿ.ಎಂ. ಫಾರೂಖ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

04. ವಿದ್ಯಾರ್ಥಿ ನಿಲಯಗಳ ಮೂಲ ಸೌಕರ್ಯ ಕೊರತೆಯ ಕುರಿತು ದಿನಾಂಕ:16.09.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:71 (521)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಎಂ.ಎಲ್.ಅನಿಲ್ ಕುಮಾರ್** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**